# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 31 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 12.09.2022 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಿಂದ ರಾಜ್ಯದ ವಿದ್ಯಾರ್ಥಿಗಳಿಗೆ ಸೈಕಲ್, ಶೂ-ಸಾಕ್ಸ್ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | **ಶೂ ಮತ್ತು ಸಾಕ್ಸ್:-**<br>2019-20ನೇ ಸಾಲಿನಲ್ಲಿ ಉಚಿತ ಶೂ-ಸಾಕ್ಸ್ ವಿತರಿಸಲಾಗಿದೆ.<br>2020-21, 2021-22 ನೇ ಸಾಲಿನಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯ ಜಾರಿಯಲ್ಲಿದ್ದುದರಿಂದ ಹಾಗೂ ಭೌತಿಕ ತರಗತಿಗಳು ಪ್ರಾರಂಭವಾಗದ ಕಾರಣ ಶೂ ಮತ್ತು ಸಾಕ್ಸ್ ವಿತರಣೆ ಮಾಡಲು ಸಾಧ್ಯವಾಗಿರುವುದಿಲ್ಲ.<br>2022-23ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ 01 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಒಟ್ಟು 45.14 ಲಕ್ಷ ವಿದ್ಯಾರ್ಥಿಗಳಿಗೆ ಶೂ ಮತ್ತು ಸಾಕ್ಸ್‌ಗಳನ್ನು ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಮೂಲಕ ಖರೀದಿ ಮಾಡಲು ಈಗಾಗಲೇ ಅಗತ್ಯ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br>**ಬೈಸಿಕಲ್:-**<br>2019-20ನೇ ಸಾಲಿನಲ್ಲಿ ಬೈಸಿಕಲ್‌ಗಳನ್ನು ವಿತರಿಸಲಾಗಿದೆ.<br>2020-21, 2021-22 ನೇ ಸಾಲಿನಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯ ಜಾರಿಯಲ್ಲಿರುವುದರಿಂದ ಹಾಗೂ ಭೌತಿಕ ತರಗತಿಗಳು ಪ್ರಾರಂಭವಾಗದ ಕಾರಣ ಬೈಸಿಕಲ್‌ಗಳನ್ನು ವಿತರಿಸಲಾಗಿರುವುದಿಲ್ಲ.<br>2022-23ನೇ ಸಾಲಿನಲ್ಲಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ ಇಲ್ಲದ ಕಾರಣ ಉಚಿತ ಬೈಸಿಕಲ್ ಯೋಜನೆ ಕೈಬಿಡಲಾಗಿದೆ. |
| ಆ) | ವಿದ್ಯಾರ್ಥಿಗಳಿಗೆ ಸೈಕಲ್ ಹಾಗೂ ಶೂ-ಸಾಕ್ಸ್ ನೀಡಲು ಬೇಕಾಗಿರುವ ಹಣ ಎಷ್ಟು; | **ಶೂ ಮತ್ತು ಸಾಕ್ಸ್:-**<br>2022-23ನೇ ಸಾಲಿನಲ್ಲಿ ಶೂ ಮತ್ತು ಸಾಕ್ಸ್ ಯೋಜನೆಗೆ ಸಂಬಂಧಿಸಿದಂತೆ ಸರ್ಕಾರದಿಂದ ಒಟ್ಟು 132.00ಕೋಟಿ ಅನುದಾನವನ್ನು ಒದಗಿಸಲಾಗಿದೆ.<br>**ಬೈಸಿಕಲ್:-**<br>2022-23ನೇ ಸಾಲಿನ ಮಕ್ಕಳಿಗೆ ರೂ. 268.52 ಕೋಟಿ ಅನುದಾನದ ಅವಶ್ಯಕತೆ ಇರುತ್ತದೆ. |
| ಇ) | ಹಳ್ಳಿಗಾಡಿನ ವಿದ್ಯಾರ್ಥಿಗಳಿಗೆ ಸೈಕಲ್ ನೀಡದಿರುವುದರಿಂದ, ಶಾಲೆಗೆ ಹೋಗಲು ಅನಾನುಕೂಲವಾಗುತ್ತಿದ್ದು, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | ಹಳ್ಳಿಗಾಡಿನ ವಿದ್ಯಾರ್ಥಿಗಳು ಶಾಲೆಗೆ ತಲುಪಲು ಉಚಿತ ಬಸ್ ಪಾಸ್ ವಿತರಣೆ ಯೋಜನೆ ಜಾರಿಯಲ್ಲಿದೆ. |

ಇಪಿ: 73 ಎಂಪಿಇ 2022

(ಬಿ.ಸಿ.ನಾಗೇಶ್)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು